# **ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 961 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 14.03.2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | **ಪ್ರಶ್ನೆ** | **ಉತ್ತರ** |
|---|---|---|
| ಅ) | ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಯಲ್ಲಿ ಎಷ್ಟು ವಸತಿ ನಿಲಯಗಳಿವೆ; ಮತ್ತು ಅವುಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಅವಕಾಶ ನೀಡಲಾಗಿದೆ; (ಮಾಹಿತಿ ನೀಡುವುದು) | ವಿಜಯಪುರ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 64 ಮೆಟ್ರಿಕ್ ಪೂರ್ವ ಹಾಗೂ 39 ಮೆಟ್ರಿಕ್ ನಂತರದ ಹೀಗೆ ಒಟ್ಟು 103 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, 8889 ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ಕಲ್ಪಿಸಲಾಗಿದೆ. ವಿವರಗಳು ಈ ಕೆಳಕಂಡಂತಿವೆ:- |

| **ಕ್ರ. ಸಂ** | **ವಿದ್ಯಾರ್ಥಿ ನಿಲಯ ವಿಧ** | **ವಿದ್ಯಾರ್ಥಿ ನಿಲಯಗಳ ಸಂಖ್ಯೆ** | **ಮಂಜೂರಾತಿ ಸಂಖ್ಯೆ** | **ಸ್ವೀಕೃತವಾದ ಅರ್ಜಿಗಳ ಸಂಖ್ಯೆ** | **ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ** | | | **ಬಾಕಿ ಉಳಿದ ಅರ್ಜಿಗಳ ಸಂಖ್ಯೆ** |
|---|---|---|---|---|---|---|---|---|
| | | | | | **ನವೀಕರಣ** | **ಹೊಸದು** | **ಒಟ್ಟು** | |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 64 | 3610 | 2837 | 2112 | 1498 | 3610 | 1339 |
| 2. | ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು | 39 | 5413 | 13269 | 3118 | 2161 | 5279 | 11108 |
| | **ಒಟ್ಟು** | **103** | **9023** | **16106** | **5230** | **3659** | **8889** | **12447** |

ಆ) ಅನೇಕ ವಿದ್ಯಾರ್ಥಿಗಳಿಗೆ ವಸತಿ ಸೌಲಭ್ಯ ಸಿಗದೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಹೆಚ್ಚುವರಿ ವಸತಿ ನಿಲಯಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಬಾಗಲಕೋಟೆ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 43 ಮೆಟ್ರಿಕ್ ಪೂರ್ವ ಹಾಗೂ 47 ಮೆಟ್ರಿಕ್-ನಂತರದ ಹೀಗೆ ಒಟ್ಟು 90 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, 9428 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ.

| ಕ್ರ. ಸಂ | ವಿದ್ಯಾರ್ಥಿನಿಲಯ ವಿಧ | ವಿದ್ಯಾರ್ಥಿ ನಿಲಯಗಳ ಸಂಖ್ಯೆ | ಮಂಜೂರಾತಿ ಸಂಖ್ಯೆ | ಸ್ವೀಕೃತವಾದ ಅರ್ಜಿಗಳ ಸಂಖ್ಯೆ | ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ | | | ಬಾಕಿ ಉಳಿದ ಅರ್ಜಿಗಳ ಸಂಖ್ಯೆ |
|---|---|---|---|---|---|---|---|---|
| | | | | | ನವೀಕರಣ | ಹೊಸದು | ಒಟ್ಟು | |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 43 | 2840 | 3860 | 2026 | 814 | 2840 | 1020 |
| 2. | ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು | 47 | 6588 | 20639 | 5126 | 1462 | 6588 | 14051 |
| | **ಒಟ್ಟು** | **90** | **9428** | **24499** | **7152** | **2276** | **9428** | **15071** |

ಮುಂದುವರೆದು, ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಿ ಪ್ರವೇಶ ದೊರಕದ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪರ್ಯಾಯವಾಗಿ ಅನುದಾನದ ಲಭ್ಯತೆಯನುಸಾರ ವಿದ್ಯಾಸಿರಿ ಯೋಜನೆಯಡಿ ಪ್ರತಿ ವಿದ್ಯಾರ್ಥಿಗೆ ಪ್ರತಿ ಮಾಹೆ ರೂ.1500/- ರಂತೆ ಗರಿಷ್ಠ 10 ತಿಂಗಳಿಗೆ ರೂ.15,000/- ಗಳನ್ನು ಮಂಜೂರು ಮಾಡಲಾಗುತ್ತದೆ.

ವಿಜಯಪುರ ಜಿಲ್ಲೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸಿ ಪ್ರವೇಶಾತಿ ದೊರಕದ 11108 ಅರ್ಜಿಗಳ ಪೈಕಿ 4140 ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಸಹಾಯಧನವನ್ನು ಕಲ್ಪಿಸಲಾಗಿರುತ್ತದೆ.

ಬಾಗಲಕೋಟೆ ಜಿಲ್ಲೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸಿ ಪ್ರವೇಶಾತಿ ದೊರಕದ 14051 ಅರ್ಜಿಗಳ ಪೈಕಿ 8180 ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಸಹಾಯಧನವನ್ನು ಕಲ್ಪಿಸಲಾಗಿರುತ್ತದೆ.

...3..

| | | |
|---|---|---|
| | | 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ 100 ಸಂಖ್ಯಾಬಲದ ಮೆಟ್ರಿಕ್ ನಂತರದ 75 ಬಾಲಕರ ಮತ್ತು 75 ಬಾಲಕಿಯರ ವಸತಿ ನಿಲಯಗಳನ್ನು ಜಿಲ್ಲಾ ಕೇಂದ್ರಗಳಲ್ಲಿ ಪ್ರಾರಂಭಿಸಲು ಸರ್ಕಾರದ ಆದೇಶ ದಿನಾಂಕ:18-06-2024ರಲ್ಲಿ ಮಂಜೂರಾತಿ ನೀಡಿ ವಿದ್ಯಾರ್ಥಿ ನಿಲಯಗಳನ್ನು ಪ್ರಸಕ್ತ ಸಾಲಿನಿಂದಲೇ ಪ್ರಾರಂಭಿಸಿ ಒಟ್ಟು 15000 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ. ಅದರಂತೆ ವಿಜಯಪುರ ಜಿಲ್ಲೆಗೆ 1 ಬಾಲಕರ ಹಾಗೂ 1 ಬಾಲಕಿಯರ ಹೀಗೆ ಒಟ್ಟು 2 ವಿದ್ಯಾರ್ಥಿನಿಲಯಗಳು ಹಾಗೂ ಬಾಗಲಕೋಟೆ ಜಿಲ್ಲೆಗೆ 4 ಬಾಲಕರು ಹಾಗೂ 4 ಬಾಲಕಿಯರ ಹೀಗೆ ಒಟ್ಟು 8 ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದ್ದು, ಪ್ರಸಕ್ತ ಸಾಲಿನಿಂದಲೇ ಸದರಿ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ. |
| ಇ) | ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹೆಚ್ಚುವರಿ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ? | ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಹೊಸದಾಗಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕ / ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಮಂಜೂರ ಮಾಡುವಂತೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ.<br><br>ಆದಾಗ್ಯೂ ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳ ವಿವಿಧ ಸ್ಥಳಗಳಲ್ಲಿ ಹೊಸದಾಗಿ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅನುದಾನದ ಲಭ್ಯತೆಯನ್ನು ಅವಲಂಬಿಸಿರುತ್ತದೆ. |

ಸಂಖ್ಯೆ:ಹಿಂವಕ 330 ಬಿಎಂಎಸ್ 2025

(ಶಿವರಾಜ.ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು